ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ25-07-2025 ರಂದು ಬೊಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಂ ಜಿ ಎಚ್ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ಕ್ಯಾದಗಿ ಗ್ರಾಮದ ಸರ್ವೆ ನಂ 243 ಕ್ಕೆ ಸಂಬದಿಸಿದಂತೆ 2020-2021 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ಎಂ ಆರ್ ನಂ ಎಚ್ 7/2017-2018 ರ ದೃಡಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ಕ್ಯಾದಗಿ ಗ್ರಾಮದ ಸರ್ವೆ ನಂ 243 ಕ್ಕೆ ಸಂಬದಿಸಿದಂತೆ 2025-2026 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-3 ಎಂದು, ಕ್ಯಾದಗಿ ಗ್ರಾಮದ ವಿಲೇಜ್ ಮ್ಯಾಪ್ ನ ದೃಢಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-4 ಎಂದು, ನಾಲ್ಕು ದಾವಾಸ್ತಿಗೆ ಸಂಬಂಧಿಸಿದಂತೆ 4 ಭಾವಚಿತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ-5 ರಿಂದ 8 ಎಂದು, ಸರಿದ ಭಾವಚಿತ್ರಕ್ಕೆ ಸಂಬಂದಿಸಿದಂತೆ ಸಿಡಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-9 ಎಂದು, ಗುರುತಿಸಲಾಯಿತು.

ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀಸವಾಲಿಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಹಿ ಇದೆ**

**ಸಿವಿಲ್ ನ್ಯಾಯಾಧೀಶರು ಸಿದ್ದಾಪುರ**